# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ,ತುಮಕೂರು-572 103 ☎:0816 – 2255650,2273511 ಫ್ಯಾಕ್ಸ್ : 0816-2270719

ಸಂಖ್ಯೆ:ತು.ವಿ.: ಪ.ವಿ.:ವಿ.ನಿ-03: 2022-23 / 27 ದಿನಾಂಕ: 26.04.2022

## ಸುತ್ತೋಲೆ

ವಿಷಯ: 2021-22 ನೇ ಸಾಲಿನ ಎನ್.ಇ.ಪಿ. ಅಡಿಯಲ್ಲಿ ಪ್ರಥಮ ಸ್ನಾತಕ ಪದವಿ ಪರೀಕ್ಷೆಯನ್ನು ತೆಗೆದುಕೊಂಡಿರುವ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಸೂಲು ಮಾಡಿ ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವ ಬಗ್ಗೆ.

ಉಲ್ಲೇಖ: ಸಂಖ್ಯೆ:ತು.ವಿ.: ಪ.ವಿ.:ಪ.ಶುಲ್ಕ: 2022-23/21 ದಿನಾಂಕ: 22.04.2022

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2021-22 ನೇ ಸಾಲಿನಲ್ಲಿ ಪ್ರಥಮ ಸ್ನಾತಕ ಪದವಿಯ ಪ್ರಥಮ ಸೆಮಿಸ್ಟರ್‌ನ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು UUCMS ಮೂಲಕ ಪಾವತಿಸಿ ವಿಶ್ವವಿದ್ಯಾನಿಲಯದ ಸಂಬಂಧಿಸಿದ ಖಾತೆಗೆ ಜಮಾ ಮಾಡುವ ಬಗ್ಗೆ ಉಲ್ಲೇಖ (1) ರಲ್ಲಿ ಈಗಾಗಲೇ ತಿಳಿಸಲಾಗಿದೆ.

ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಿದ್ದು, ವಿದ್ಯಾರ್ಥಿ ವೇತನವು ಕಾಲೇಜು ಪ್ರಾಂಶುಪಾಲರ ಖಾತೆಗೆ/ ವಿದ್ಯಾರ್ಥಿಗಳ ಖಾತೆಗೆ ಜಮೆಯಾಗುತ್ತಿದ್ದು, ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದಿಂದ ವರ್ಗಾವಣೆ ಮಾಡಲು ಸೂಚಿಸಲಾಗಿತ್ತು. ಈ ಸಾಲಿನಿಂದ ವಿದ್ಯಾರ್ಥಿಗಳು UUCMS ಮೂಲಕವೇ ಪರೀಕ್ಷಾ ಶುಲ್ಕವನ್ನು ಪಾವತಿಸಿದಾಗ ಮಾತ್ರ ಅವರಿಗೆ ಪರೀಕ್ಷೆ ಬರೆಯಲು ಸಾಧ್ಯವಾಗುತ್ತದೆ. ಪ್ರವೇಶಾತಿ Module ನಲ್ಲಿ ನೊಂದಾಯಿಸಿರುವ ಆದಾಯ ಮಿತಿ ರೂ. 2,50,000-00 ( ಎರಡು ಲಕ್ಷದ ಐವತ್ತು ಸಾವಿರ ರೂಪಾಯಿ ಮಾತ್ರ) ಗಿಂತ ಅಧಿಕವಿರುವ ವಿದ್ಯಾರ್ಥಿಗಳು ಪೂರ್ಣ ಪ್ರಮಾಣದ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ನಿಗದಿತ ಆದಾಯಕ್ಕಿಂತ ಕಡಿಮೆಯಿರುವ ಮತ್ತು ವಿದ್ಯಾರ್ಥಿವೇತನ ಮಂಜೂರಾಗುವ ವಿದ್ಯಾರ್ಥಿಗಳು ಮಾತ್ರ ರೂ. 226-00 (ಎರಡು ನೂರ ಇಪ್ಪತ್ತಾರು ರೂಪಾಯಿ ಮಾತ್ರ) ಗಳನ್ನು ಪಾವತಿಸಬೇಕಾಗಿರುತ್ತದೆ. ಆದುದರಿಂದ Student Scholar Ship Portal (SSP) ಅಡಿಯಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಪ್ರಾಂಶುಪಾಲರ / ವಿದ್ಯಾರ್ಥಿಗಳ ಖಾತೆಗೆ ಜಮೆಯಾದ ತಕ್ಷಣ ಪರೀಕ್ಷಾ ಶುಲ್ಕವನ್ನು ಸ್ವೀಕರಿಸಿ ಯಾವುದೇ ವಿಳಂಭಕ್ಕೆ ಅವಕಾಶವಿಲ್ಲದೆ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ ಖಾತೆಗೆ ಜಮೆ ಮಾಡಿ ಈ ಸಂಬಂಧ ವಿವರಗಳನ್ನು ಪರೀಕ್ಷಾ ವಿಭಾಗ ಹಾಗೂ ಹಣಕಾಸು ವಿಭಾಗಕ್ಕೆ ಸಲ್ಲಿಸಲು ಸೂಚಿಸಿದೆ.

ಕುಲಸಚಿವರು (ಪರೀಕ್ಷಾಂಗ)

ಗೆ,

ಪ್ರಾಂಶುಪಾಲರುಗಳು, ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಇಂದೇ ಅಂತರ್ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.